ಪ್ರಜಾ ಭಾರತ

ಕನ್ನಡ ದಿನಪತ್ರಿಕೆ ಸತ್ಯದ ಪರ - ಪ್ರಜೆಗಳ ಧ್ವನಿ..!



ಮೈಸೂರು ಅರಮನೆ ಜಾಗ, ಬೋರ್ಡ್ ಸರ್ಕಾರದ್ದು; ಕೆಲ ಭಾಗ ರಾಜಮನೆತನದ ವಾಸಕ್ಕೆ ಬಿಟ್ಟುಕೊಟ್ಟಿದ್ದೇವೆ: ಯತೀಂದ್ರ ಸಿದ್ದರಾಮಯ್ಯ

ಸಂಪಾದಕ: ದಿನೇಶ್ ಬೆಳ್ಳಾವರ, ಮೊ: 94821 01707 Email. prajabharathanews@gmail.com ಸಹ ಸಂಪಾದಕ : ಬಿ.ಬಿ ಶಿವರಾಜು, ಮೊ: 98809 08468

Volume-01 Issue-56 HASSAN Date : 27.10.2026 TUESDAY Reg No.PRGI No. KNKAN/26/A6168 Page-02 Rs.1.00

ಸಂಪುಟ–01 ಸಂಚಿಕೆ–56 ಹಾಸನ ದಿನಾಂಕ: 27.10.2026 ಮಂಗಳವಾರ ರಿ.ನಂ.PRGI No. KNKAN/26/A6168 ಪುಟ:02 ಬೆಲೆ:1.00ರೂ.

ಬೆಳೆ ನಾಶದಿಂದ ಕಂಗಾಲಾದ ರೈತರು; ಭಯದ ನೆರಳಲ್ಲಿ ಕೂಲಿ ಕಾರ್ಮಿಕರು



ಪ್ರಜಾ ಭಾರತ ವರದಿ

ಬೇಲೂರು: ತಾಲೂಕಿನ ಬಿಕ್ಕೋಡು ಹೋಬಳಿಯ ಜಗಬೋರನಹಳ್ಳಿ ಗ್ರಾಮದಲ್ಲಿ ಕಾಡಾನೆಗಳ ಹಾವಳಿ ಮತ್ತೆ ತೀವ್ರಗೊಂಡಿದ್ದು, ಆನೆಗಳ ಕಾಳಗದಿಂದ ರೈತರು ಬೆಳೆದ ಬೆಳೆಗಳು ಸಂಪೂರ್ಣ ನಾಶವಾಗಿವೆ ಎನ್ನಲಾಗಿದೆ.

ಗ್ರಾಮದ ಸುತ್ತಮುತ್ತ ಪದೇಪದೇ ಕಾಣಿಸಿಕೊಳ್ಳುತ್ತಿರುವ ಕಾಡಾನೆಗಳಿಂದ ರೈತರು ಆತಂಕಕ್ಕೊಳಗಾಗಿದ್ದಾರೆ. ಬೆಳೆಗಳನ್ನು ಕಳೆದುಕೊಂಡು ನಷ್ಟ ಅನುಭವಿಸುತ್ತಿರುವ ರೈತರಿಗೆ ಒಂದೆಡೆಯಾದರೆ, ಮತ್ತೊಂದೆಡೆ ಕಾಡಾನೆಗಳ ಭೀತಿಯಿಂದ ಕೂಲಿ ಕಾರ್ಮಿಕರು ಕೃಷಿ ಕೆಲಸಕ್ಕೆ ತೆರಳಲೂ ಆತಂಕಪಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಕಾಡಾನೆಗಳ ಹಾವಳಿಗೆ ಶಾಶ್ವತ ಪರಿಹಾರ ಯಾವಾಗ, ಎಂಬ ಪ್ರಶ್ನೆ ಇದೀಗ ಗ್ರಾಮಸ್ಥರನ್ನು ಕಾಡುತ್ತಿದೆ. ಸಂಬಂಧಪಟ್ಟ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಬೆಳೆ ನಷ್ಟ ಪರಿಶೀಲಿಸಿ, ರೈತರಿಗೆ ಸೂಕ್ತ ಪರಿಹಾರ ಒದಗಿಸುವುದರ ಜೊತೆಗೆ ಕಾಡಾನೆಗಳ ಹಾವಳಿ ನಿಯಂತ್ರಣಕ್ಕೆ ಶಾಶ್ವತ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಹಣಕಾಸಿನ ದ್ವೇಷಕ್ಕೆ ಮಾರಕಾಸ್ತ್ರಗಳಿಂದ ಹಲ್ಲೆ: ರಕ್ಷಿತ್‌ಗೆ ಗಂಭೀರ ಗಾಯ



ಪ್ರಜಾ ಭಾರತ ವರದಿ

ಚನ್ನರಾಯಪಟ್ಟಣ: ವೈಯಕ್ತಿಕ ಹಾಗೂ ಹಣ–ಕಾಸಿನ ದ್ವೇಷದ ಹಿನ್ನೆಲೆಯಲ್ಲಿ ಯುವಕನ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿರುವ ಘಟನೆ ಪಟ್ಟಣದ ಬಿ.ಎಂ. ರಸ್ತೆಯ ಗಣಪತಿ ದೇವಾಲಯದ ಮುಂಭಾಗದಲ್ಲಿ ಸೋಮವಾರ ಬೆಳಗ್ಗೆ ನಡೆದಿದೆ.


ಪಟ್ಟಣದ ಗಾಯತ್ರಿ ಬಡಾವಣೆಯ ನಿವಾಸಿ ರಕ್ಷಿತ್ ಹಲ್ಲೆಗೊಳಗಾದ ಯುವಕ. ಕೆ. ಮಲ್ಲೇನಹಳ್ಳಿ ಗ್ರಾಮದ ವಿನಯ್, ಮನು ಹಾಗೂ ಇತರರು ಹಲ್ಲೆ ನಡೆಸಿದ್ದಾರೆ ಎಂದು ರಕ್ಷಿತ್ ಅವರ ತಾಯಿ ಸುಶೀಲಮ್ಮ ಆರೋಪಿಸಿದ್ದಾರೆ.

ಸುಶೀಲಮ್ಮ ಅವರಿಂದ ವಿನಯ್ ಮತ್ತು ಮನು ರೂ.2 ಲಕ್ಷ ಸಾಲ ಪಡೆದಿದ್ದರು ಎನ್ನಲಾಗಿದ್ದು, ಹಣ ಮರುಪಾವತಿ ವಿಚಾರವಾಗಿ ರಕ್ಷಿತ್ ಹಾಗೂ ಮನು ನಡುವೆ ಈ ಹಿಂದೆ ಮಾತಿನ ಚಕಮಕಿ ನಡೆದಿತ್ತು. ಸಾಲದ ಹಣ ಹಿಂದಿರುಗಿಸುವಂತೆ ಹಲವು ಬಾರಿ ಕೇಳಿಕೊಂಡರೂ ಹಣ ನೀಡದೆ ಗಲಾಟೆ ಮಾಡುತ್ತಿದ್ದರು ಎಂದು ಸುಶೀಲಮ್ಮ ದೂರಿದ್ದಾರೆ.

ಸೋಮವಾರ ಬೆಳಗ್ಗೆ ಸುಮಾರು 10 ಗಂಟೆಗೆ ರಕ್ಷಿತ್ ತಮ್ಮ ಸ್ನೇಹಿತರೊಂದಿಗೆ ಗಣಪತಿ ದೇವಾಲಯದ ಪಕ್ಕದ ಟೀ ಕ್ಯಾಂಟೀನ್‌ಗೆ ಕಾಫಿ ಕುಡಿಯಲು ತೆರಳಿದ್ದ ಸಂದರ್ಭದಲ್ಲಿ ವಿನಯ್, ಮನು ಹಾಗೂ ಇತರರು ಏಕಾಏಕಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ. ಈ ವೇಳೆ ರಕ್ಷಿತ್ ಅವರ ಹೊಟ್ಟೆಯ ಎರಡು ಭಾಗಗಳಿಗೆ ಹಾಗೂ ಕುತ್ತಿಗೆಗೆ ಚಾಕುವಿನಿಂದ ಇರಿದು ಆರೋಪಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ.

ಗಾಯಗೊಂಡ ರಕ್ಷಿತ್ ಅವರನ್ನು ಸ್ಥಳೀಯರು ಚನ್ನರಾಯಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ, ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಹಾಸನದ ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ.


ಘಟನೆಗೆ ಸಂಬಂಧಿಸಿದಂತೆ ಚನ್ನರಾಯಪಟ್ಟಣ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.



ಹಾಸನ: ಹಾಸನಾಂಬ ದೇವಿ ದರ್ಶನೋತ್ಸವ ಹಾಗೂ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಜಿಲ್ಲಾ ಖಜಾನೆಯಲ್ಲಿ ಸಂರಕ್ಷಿಸಿಡಲಾಗಿದ್ದ ದೇವಿಯ ಚಿನ್ನಾಭರಣಗಳಿಗೆ ಶಾಸ್ತ್ರೋಕ್ತವಾಗಿ ವಿಶೇಷ ಪೂಜೆ ಸಲ್ಲಿಸಲಾಯಿತು.ಸಾಲಗಾಮೆ ರಸ್ತೆ ಸಮೀಪದ ಜಿಲ್ಲಾ ಖಜಾನೆಯಲ್ಲಿ ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್, ತಹಸೀಲ್ದಾರ್ ಗೀತಾ ಸೇರಿದಂತೆ ಅಧಿಕಾ–ರಿಗಳು ಪೂಜೆ ನೆರವೇರಿಸಿದರು.

ಕಾಡಾನೆಗಳ ಅಟ್ಟಹಾಸಕ್ಕೆ ರೈತರ ಬದುಕೇ ಬಲಿ

ಶಾಶ್ವತ ಪರಿಹಾರಕ್ಕೆ ಸರ್ಕಾರಕ್ಕೆ ಗಡುವು । ಸ್ಪಂದಿಸದಿದ್ದರೆ ವಿಧಾನಸೌಧಕ್ಕೆ ಮುತ್ತಿಗೆ



● ವರದಿ : ಬಿ.ಬಿ.ಶಿವರಾಜು

ಪ್ರಜಾ ವಿಶೇಷ

ಬೇಲೂರು: ಒಂದೆಡೆ ಹವಾಮಾನ ವೈಪರೀತ್ಯ, ಮತ್ತೊಂದೆಡೆ ಕಾರ್ಮಿಕರ ಕೊರತೆ, ಇದರ ನಡುವೆ ಕಾಡಾನೆಗಳ ನಿರಂತರ ದಾಳಿ, ಹೀಗೆ ಸಾಲ ಮಾಡಿ ಬೆಳೆದ ಬೆಳೆ ಕಣ್ಣೆದುರೇ ನಾಶವಾಗುತ್ತಿದ್ದರೂ ರೈತರ ನೆರವಿಗೆ ಧಾವಿಸಬೇಕಾದ ಸರ್ಕಾರ ಮಾತ್ರ ಶಾಶ್ವತ ಪರಿಹಾರ ಕಲ್ಪಿಸುವಲ್ಲಿ ವಿಫಲವಾಗಿದೆ ಎಂಬ ಆಕ್ರೋಶ ಬೇಲೂರು ತಾಲೂಕಿನ ಮಲೆನಾಡು ಭಾಗದಲ್ಲಿ ಸ್ಫೋಟಗೊಂಡಿದೆ. ಇನ್ನು ಮನವಿ, ಪ್ರತಿಭಟನೆಗಳಿಂದ ಪ್ರಯೋಜನವಿಲ್ಲ ಎಂಬ ತೀರ್ಮಾನಕ್ಕೆ ಬಂದಿರುವ ರೈತರು ಇದೀಗ ಬೆಂಗಳೂರಿನ ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ಸಜ್ಜಾಗುತ್ತಿದ್ದಾರೆ.

ಕಳೆದ ಹಲವು ವರ್ಷಗಳಿಂದ ತಾಲೂಕಿನ ಮಲೆನಾಡು ಭಾಗಗಳಲ್ಲಿ ಕಾಡಾನೆಗಳ ಹಾವಳಿ ಮಿತಿಮೀರಿದೆ. ಆನೆಗಳ



ದಾಳಿಗೆ ಹಲವರು ಪ್ರಾಣ ಕಳೆದುಕೊಂಡಿದ್ದು, ಅನೇಕರು ಗಾಯಗೊಂಡಿದ್ದಾರೆ. ಜೋಳ, ರಾಗಿ, ಅಡಿಕೆ, ತೆಂಗು, ಶುಂಠಿ ಸೇರಿದಂತೆ ವಿವಿಧ ಬೆಳೆಗಳು ನಾಶವಾಗುತ್ತಿದ್ದು, ರೈತರು ಲಕ್ಷಾಂತರ ರೂಪಾಯಿ ನಷ್ಟ ಅನುಭವಿಸುತ್ತಿದ್ದಾರೆ. ಆದರೂ ಈ ಸಮಸ್ಯೆಗೆ ಶಾಶ್ವತ ಪರಿಹಾರ ಮಾತ್ರ ಮರೀಚಿಕೆಯಾಗಿದೆ.

● ರೇಡಿಯೋ ಕಾಲರ್‌ನಿಂದ ಪರಿಹಾರ ಸಿಗುತ್ತದೆಯೇ.

ಕಾಡಾನೆಗಳು ಕಾಣಿಸಿಕೊಂಡಾಗ ಅವುಗಳನ್ನು ಸೆರೆಹಿಡಿದು ರೇಡಿಯೋ ಕಾಲರ್ ಅಳವಡಿಸುವುದು ಅರಣ್ಯ ಇಲಾಖೆಯ ಸಾಮಾನ್ಯ ಕ್ರಮವಾಗಿದೆ. ಇದ–ರಿಂದ ಆನೆಗಳ ಚಲನವಲನವನ್ನು ಪತ್ತೆಹಚ್ಚಬಹುದು. ಆದರೆ ರೈತರ ಬೆಳೆ, ಜೀವ ಮತ್ತು ಆಸ್ತಿಯನ್ನು ರಕ್ಷಿಸಲು ಸಾಧ್ಯವಾಗುತ್ತಿದೆಯೇ ಎಂಬ ಪ್ರಶ್ನೆ ಇದೀಗ ಗಂಭೀರವಾಗಿ ಕೇಳಿಬಂದಿದೆ.

ಆನೆ ಎಲ್ಲಿದೆ ಎಂಬ ಮಾಹಿತಿ ಸಿಗುವುದ–ರಿಂದ ಮಾತ್ರ ರೈತರ ಬದುಕು ಸುರಕ್ಷಿತವಾಗುವುದಿಲ್ಲ. ಆನೆಗಳ ಹಾವಳಿ ತಡೆಯಲು ಪರಿಣಾಮಕಾರಿ ಹಾಗೂ ಶಾಶ್ವತ ಕ್ರಮ ಬೇಕು ಎಂಬುದು ರೈತರು ಮತ್ತು ಕಾಫಿ ಬೆಳೆಗಾರರ ಒತ್ತಾಯವಾಗಿದೆ. ವರ್ಷಗಳಿಂದ ನಡೆಯುತ್ತಿರುವ ಪ್ರತಿಭಟನೆಗಳು, ಸಲ್ಲಿಸಿರುವ ಮನವಿಗಳು ಮತ್ತು ನೀಡಿರುವ ಎಚ್ಚರಿಕೆಗಳ ನಡುವೆಯೂ ಸಮಸ್ಯೆ ಮುಂದುವರಿದಿರುವುದು ರೈತರ ಅಸಮಾಧಾನಕ್ಕೆ ಕಾರಣವಾಗಿದೆ.

● ತೋಟಗಳಿಗೆ ಬರಲು ಹೆದರುವ ಕಾರ್ಮಿಕರು

ಕಾಡಾನೆಗಳ ನಿರಂತರ ಸಂಚಾರದಿಂದ ಕಾಫಿ ತೋಟಗಳಲ್ಲಿ ಕೆಲಸ ಮಾಡಲು ಕಾರ್ಮಿಕರು ಹಿಂದೇಟು ಹಾಕುತ್ತಿದ್ದಾರೆ. ಯಾವ ಕ್ಷಣದಲ್ಲಿ ಆನೆಗಳು ಎದುರಾಗುತ್ತವೆಯೋ ಎಂಬ ಆತಂಕದಲ್ಲಿ ಜನರು ಮನೆಯಿಂದ ಹೊರಬರಲೂ ಭಯಪಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ತೋಟಗಳ ನಿರ್ವಹಣೆ ಕುಂಠಿತವಾಗಿದ್ದು, ಉಳಿದಿರುವ ಬೆಳೆಯನ್ನೂ ರಕ್ಷಿಸಿಕೊಳ್ಳಲು ಬೆಳೆಗಾರರು ಪರದಾಡುತ್ತಿದ್ದಾರೆ.

ಈಗಾಗಲೇ ಹವಾಮಾನ ವೈಪರೀತ್ಯ ಮತ್ತು ಕಾರ್ಮಿಕರ ಕೊರತೆಯಿಂದ ಸಂಕಷ್ಟದಲ್ಲಿರುವ ಕಾಫಿ ಬೆಳೆಗಾರರಿಗೆ ಕಾಡಾನೆಗಳ ಹಾವಳಿ ಗಾಯದ ಮೇಲೆ ಬರೆ ಎಳೆದಂತಾಗಿದೆ. ಕೃಷಿಗಾಗಿ ಮಾಡಿದ ಸಾಲ ತೀರಿಸುವುದು ಹೇಗೆ ಎಂಬ ಚಿಂತೆ ಒಂದೆಡೆಯಾದರೆ, ಮುಂದಿನ ಬೆಳೆ ಉಳಿಯುವುದೇ ಎಂಬ ಆತಂಕ ಮತ್ತೊಂದೆಡೆ ಕಾಡುತ್ತಿದೆ.

● 4 ಎಕರೆ ಜೋಳ ನಾಶ; ರೂ.5 ಲಕ್ಷ ನಷ್ಟ

ತಾಲೂಕಿನ ಜಗಬೋರನಹಳ್ಳಿ ಅರಣ್ಯ ಪ್ರದೇಶದ ಸುತ್ತಮುತ್ತ 50ಕ್ಕೂ ಹೆಚ್ಚು ಕಾಡಾನೆಗಳು ಸಂಚರಿಸುತ್ತಿದ್ದು, ಸುತ್ತಮುತ್ತಲಿನ ರೈತರ ಜಮೀನುಗಳಿಗೆ ನುಗ್ಗಿ ಬೆಳೆಗಳನ್ನು ನಾಶಪಡಿಸುತ್ತಿವೆ ಎಂಬ ಆತಂಕಕಾರಿ ಮಾಹಿತಿ ಹೊರಬಿದ್ದಿದೆ.

ರೈತ ಜಯಪ್ರಕಾಶ್ ಅವರ ನಾಲ್ಕು ಎಕರೆ ಜಮೀನಿನಲ್ಲಿ ಬೆಳೆದಿದ್ದ ಜೋಳವನ್ನು ಕಾಡಾನೆಗಳು ಸಂಪೂರ್ಣ ನಾಶಪಡಿಸಿದ್ದು, ಸುಮಾರು ರೂ.5 ಲಕ್ಷ ನಷ್ಟವಾಗಿದೆ. ಆನೆಗಳ ಹಾವಳಿಯನ್ನು ತಡೆಯಲು ಸರ್ಕಾರಕ್ಕೆ ಸಾಧ್ಯವಾಗದಿದ್ದರೆ, ರೈತರ ಜಮೀನುಗಳನ್ನು ಖರೀದಿಸಿ ಪರ್ಯಾಯ ವ್ಯವಸ್ಥೆ ಕಲ್ಪಿಸಲಿ ಎಂದು ಅವರು ಒತ್ತಾಯಿಸಿದ್ದಾರೆ.

● ಇನ್ನೆಷ್ಟು ದಿನ ರೈತರ ಗೋಳು ಕೇಳದ ಸರ್ಕಾರ

ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಹಲವು ಬಾರಿ ಪ್ರತಿಭಟನೆ ನಡೆಸಿದರೂ ಸಮಸ್ಯೆ ಬಗೆಹ–ರಿಯದ ಹಿನ್ನೆಲೆಯಲ್ಲಿ ರೈತರು ಹಾಗೂ ಕಾಫಿ ಬೆಳೆಗಾರರ ಸಂಘಟನೆಗಳು ಹೋರಾಟ ತೀವ್ರಗೊಳಿಸಲು ಮುಂದಾಗಿವೆ. ಸರ್ಕಾರ ಕೂಡಲೇ ಶಾಶ್ವತ ಪರಿಹಾರ ರೂಪಿಸದಿದ್ದರೆ ಬೆಂಗಳೂರಿಗೆ ತೆರಳಿ ವಿಧಾನಸೌಧಕ್ಕೆ ಮುತ್ತಿಗೆ ಹಾಕುವುದಾಗಿ ಎಚ್ಚರಿಕೆ ನೀಡಿವೆ.

ಕಾಡಾನೆಗಳ ಹಾವಳಿಯಿಂದ ರೈತರು ಬೆಳೆದ ಬೆಳೆ ನಾಶವಾಗುತ್ತಿದೆ, ಜೀವಕ್ಕೆ ಅಪಾಯ ಎದುರಾಗುತ್ತಿದೆ, ಕೃಷಿಯನ್ನೇ ನಂಬಿದ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುತ್ತಿವೆ. ಇಷ್ಟಾದರೂ ಶಾಶ್ವತ ಪರಿಹಾರಕ್ಕೆ ಇನ್ನೆಷ್ಟು ಸಾವು–ನೋವು ಸಂಭವಿಸಬೇಕು? ರೈತರ ಬದುಕು ಬೀದಿಗೆ ಬೀಳುವವರೆಗೂ ಸರ್ಕಾರ ಕಾಯುತ್ತದೆಯೇ, ಎಂಬ ಪ್ರಶ್ನೆ ಇದೀಗ ಬೇಲೂರು ಮಲೆನಾಡಿನ ಜನರನ್ನು ಕಾಡುತ್ತಿದೆ.



ಮಳೆ ಇಲ್ಲದೆ ಸಾಲ ಮಾಡಿ ಇನ್ನೇನು ಕೈ ಸೇರಬೇಕಾದ ಬೆಳೆ ಕಳೆದು ಕೊಂಡು ಲಕ್ಷಾಂತರ ರೂ. ನಷ್ಟ ಮಾಡಿಕೊಂಡು ಜೀವ ಭಯದಲ್ಲೇ ರೈತರ ಬದುಕು ಸಾಧಿಸಬೇಕಾಗಿದೆ 4 ಎಕರೆ ಜೋಳ ನಾಶವಾಗಿ ರೂ.5 ಲಕ್ಷ ನಷ್ಟವಾದರೂ ಸರ್ಕಾರಕ್ಕೆ ಕಣ್ಣು ತೆರೆಯುತ್ತಿಲ್ಲವೇ, ರೇಡಿಯೋ ಕಾಲರ್ ರೈತರ ಸಂಕಷ್ಟಕ್ಕೆ ಪರಿಹಾರ ವಲ್ಲ, ಶಾಶ್ವತ ಕ್ರಮ ಕೈಕೈಗೊಳ್ಳದಿದ್ದರೆ ಈ ಭಾಗದ ರೈತರೊಂದಿಗೆ ಸೇರಿ ವಿಧಾನಸೌಧಕ್ಕೆ ಮುತ್ತಿಗೆ ಹಾಕ ಬೇಕಾಗುತ್ತದೆ.

–ಆದೇಶ್ ಲಿಂಗರಾಜ್, ಅಧ್ಯಕ್ಷರು ಕೆ.ಆರ್. ಎಸ್ ಪಕ್ಷ ಬೇಲೂರು.



ಬರಗಾಲದಿಂದ ಈಗಾಗಲೇ ತತ್ತ–ರಿಸಿರುವ ರೈತರಿಗೆ ಕಾಡಾನೆಗಳ ಹಾವಳಿ ಮತ್ತಷ್ಟು ಸಂಕಷ್ಟ ತಂದಿದೆ. ಶಾಸಕರು, ಸಚಿವರು, ಜಿಲ್ಲಾಧಿಕಾರಿಗಳು ಹಾಗೂ ಮುಖ್ಯಮಂತ್ರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದರೂ ಶಾಶ್ವತ ಪರಿಹಾರ ದೊರೆತಿಲ್ಲ.

–ಶಿವಕುಮಾರ್, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ.

ಹಾಸನಾಂಬ ಉತ್ಸವಕ್ಕೆ ದಸರಾ ಕಳೆ; 400 ಕುಸ್ತಿಪಟುಗಳ ಅಖಾಡ ಪ್ರವೇಶ

ಪ್ರಜಾ ಭಾರತ ವರದಿ

ಹಾಸನ: ಐತಿಹಾಸಿಕ ಹಾಸನಾಂಬ ಉತ್ಸವದ ಪೂರ್ವಸಿದ್ಧತೆಗಳು ಬಿರುಸಿನಿಂದ ಸಾಗುತ್ತಿದ್ದು, ಈ ಬಾರಿ ಕುಸ್ತಿ ಪಂದ್ಯಾವಳಿಯೇ ಪ್ರಮುಖ ಆಕರ್ಷಣೆಯಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ತಿಳಿಸಿದರು.

ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದ ಬಳಿಕ ಮಾತನಾಡಿದ ಅವರು, ಮೈಸೂರು ದಸರಾ ಮಾದರಿಯಲ್ಲಿ ಕುಸ್ತಿ ಪಂದ್ಯಾವಳಿ ನಡೆಯಲಿದ್ದು, ಸುಮಾರು 400 ಕುಸ್ತಿಪಟುಗಳು ಪಾಲ್ಗೊಳ್ಳಲಿದ್ದಾರೆ. ಇದರೊಂದಿಗೆ 150 ವಾಲಿಬಾಲ್ ಆಟಗಾರರು, 200 ಕಬಡ್ಡಿ ಆಟಗಾರರು ಭಾಗವಹಿಸಲಿದ್ದಾರೆ. ಹೋರಿ, ಟಗರು ಹಾಗೂ ಶ್ವಾನ ಪ್ರದರ್ಶನ ಮತ್ತು ವಿದ್ಯುತ್ ದೀಪಾಲಂಕಾರಗಳು ಉತ್ಸವಕ್ಕೆ ಮೆರುಗು ನೀಡಲಿವೆ ಎಂದರು.

ನಗರದ ರಸ್ತೆಗುಂಡಿಗಳನ್ನು 2–3 ದಿನಗಳಲ್ಲಿ ಮುಚ್ಚಲಾಗುವುದು. ದೇಶ–ವಿದೇಶಗಳಿಂದ ಆಗಮಿಸುವ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಉತ್ಸವದ ವಿಚಾರದಲ್ಲಿ



ಹಾಸನ ಶಾಸಕರೊಂದಿಗೆ ಯಾವುದೇ ವೈಮನಸ್ಸಿಲ್ಲ. ಎಲ್ಲರೂ ಒಗ್ಗಟ್ಟಿನಿಂದ ನಾಡಹಬ್ಬ ಆಚರಿಸಬೇಕು ಎಂದು ಸ್ಪಷ್ಟಪಡಿಸಿದರು.

ಸ್ಟಿಂಗ್ ಆಪರೇಷನ್ ಪ್ರಕರಣದ ತನಿಖೆ ನಡೆಯುತ್ತಿದ್ದು, ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ನಡೆದಿರುವ ಷಡ್ಯಂತ್ರ ಬಯಲಾಗಬೇಕು ಎಂದ ಅವರು, ಹಾಸನ ಜಿಲ್ಲೆಗೆ ಐಐಟಿ ಮಂಜೂರು ಮಾಡುವ ನಿಟ್ಟಿನಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಪ್ರಯತ್ನಿಸಬೇಕು ಎಂದು ಮನವಿ ಮಾಡಿದರು.

ಬೇಲೂರಿನ ಮಣ್ಣಿನ ಪ್ರತಿಭೆಗೆ ಬೆಳ್ಳಿತೆರೆಯ ಗೆಲುವು

'ಪ್ರೇಮದ ಊರಲ್ಲಿ' ಚಿತ್ರತಂಡಕ್ಕೆ ಅದ್ದೂರಿ ಸ್ವಾಗತ: ಶಾಸಕ ಎಚ್.ಕೆ. ಸುರೇಶ್ ಅಭಿನಂದನೆ

ಪ್ರಜಾ ಭಾರತ ವರದಿ

ಬೇಲೂರು: ಸ್ಥಳೀಯ ಪ್ರತಿಭೆ ಮನೋಜ್ ಕುಮಾರ್ ನಿರ್ದೇಶನದ 'ಪ್ರೇಮದ ಊರಲ್ಲಿ' ಕನ್ನಡ ಚಿತ್ರಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ, ಚಿತ್ರತಂಡಕ್ಕೆ ಬೇಲೂರಿನಲ್ಲಿ ಅದ್ದೂರಿ ಸ್ವಾಗತ ನೀಡಿ ಸನ್ಮಾನಿಸಲಾಯಿತು.

ಬೇಲೂರು ತಾಲೂಕಿನ ಬೈರೇಗೌಡನ ಕೊಪ್ಪಲು ಗ್ರಾಮದ ಮನೋಜ್ ಕುಮಾರ್ ಸೇರಿದಂತೆ ಸ್ಥಳೀಯ ಪ್ರತಿಭೆಗಳು ರೂಪಿಸಿರುವ ಚಿತ್ರದ ಯಶಸ್ಸು ತಾಲೂಕಿನ ಜನರಲ್ಲಿ ಹೆಮ್ಮೆ ಮೂಡಿಸಿದೆ. ಈ ಸಂದರ್ಭದಲ್ಲಿ ಚಿತ್ರತಂಡವು ಐತಿಹಾಸಿಕ ಶ್ರೀ ಚನ್ನಕೇಶವ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿತು. ಶಾಸಕ ಎಚ್.ಕೆ. ಸುರೇಶ್ ಚಿತ್ರತಂಡವನ್ನು ಅಭಿನಂದಿಸಿ ಶುಭ ಹಾರೈಸಿದರು.

ಕಡಿಮೆ ಬಜೆಟ್‌ನಲ್ಲಿಯೂ ಉತ್ತಮ ಕಥೆ, ಪರಿಶ್ರಮ ಹಾಗೂ ಜನರ ಪ್ರೀತಿಯಿಂದ ಚಿತ್ರ ಯಶಸ್ಸು ಕಾಣಬಹುದು ಎಂಬುದಕ್ಕೆ 'ಪ್ರೇಮದ ಊರಲ್ಲಿ' ಸಾಕ್ಷಿಯಾಗಿದೆ. ಸ್ಥಳೀಯ ಪ್ರತಿಭೆಗಳು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಳ್ಳಲಿ ಎಂದು ಶಾಸಕ ಸುರೇಶ್ ಆಶಿಸಿದರು.

ನಿರ್ದೇಶಕ ಮನೋಜ್ ಕುಮಾರ್ ಮಾತನಾಡಿ, ಚಿತ್ರದ ಬಹುತೇಕ ಚಿತ್ರೀಕರಣ ಬೇಲೂರು ಮತ್ತು ಹಳೇಬೀಡು ಸುತ್ತಮುತ್ತ ನಡೆದಿದ್ದು, ಸ್ಥಳೀಯ ಗ್ರಾಮಸ್ಥರು



ಉತ್ತಮ ಸಹಕಾರ ನೀಡಿದ್ದಾರೆ. ಬೇಲೂರಿನ ರೇಣುಕಾ ಚಿತ್ರಮಂದಿರದಲ್ಲಿ ಚಿತ್ರಕ್ಕೆ ದೊರೆಯುತ್ತಿರುವ ಪ್ರತಿಕ್ರಿಯೆ ಸಂತಸ ತಂದಿದೆ ಎಂದರು.

ನಟ ಶ್ರೀರಾಮ್ ಜನರ ಪ್ರೀತಿಗೆ ಕೃತಜ್ಞತೆ ಸಲ್ಲಿಸಿದರೆ, ನಟಿ ತಪಸ್ವಿನಿ ತಮ್ಮ ಹುಟ್ಟೂರಿನ ಜನರು ನೀಡಿದ ಪ್ರೋತ್ಸಾಹ ಕಂಡು ಭಾವುಕರಾದರು. ನಿರ್ಮಾಪಕ ಹಾಗೂ ಕಥೆಗಾರ ದೇವೇಂದ್ರ ಚಿತ್ರೀಕರಣದ ವೇಳೆ ಗ್ರಾಮಸ್ಥರು ನೀಡಿದ ನೆರವನ್ನು ಸ್ಮರಿಸಿದರು.

ಒಟ್ಟಿನಲ್ಲಿ, 'ಪ್ರೇಮದ ಊರಲ್ಲಿ' ಚಿತ್ರದ ಯಶಸ್ಸು ಬೇಲೂರಿನ ಸ್ಥಳೀಯ ಪ್ರತಿಭೆಗಳಿಗೆ ಹೊಸ ಭರವಸೆ ಮೂಡಿಸಿದ್ದು, ಹುಟ್ಟೂರಿನ ಜನರ ಪ್ರೀತಿ ಚಿತ್ರತಂಡದ ಉತ್ಸಾಹ ಹೆಚ್ಚಿಸಿದೆ.

ಭ್ರಷ್ಟರು, ಅಧರ್ಮಿಗಳು ಉಳಿಯಲಾರರು ಎಂಬುದಕ್ಕೆ ರಾಮಾಯಣವೇ ನಿದರ್ಶನ: ಶಿವಲಿಂಗೇಗೌಡ

ಪ್ರಜಾ ಭಾರತ ವರದಿ

ಹಾಸನ: ರಾಮಾಯಣದ ಪ್ರತಿಯೊಂದು ಪಾತ್ರವೂ ಮನುಕುಲಕ್ಕೆ ಉತ್ತಮ ಸಂದೇಶ ನೀಡುತ್ತವೆ. ಶ್ರೀರಾಮನ ಆದರ್ಶ, ಆಂಜನೇಯನ ಸ್ವಾಮಿನಿಷ್ಠೆ, ಲಕ್ಷ್ಮಣನ ತ್ಯಾಗದ ಗುಣಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಬಕಾರಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು.

ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭ್ರಷ್ಟಾಚಾರಿಗಳು, ಅಪ್ರಾಮಾಣಿಕರು ಹಾಗೂ ಅಧರ್ಮಿಗಳು ಶಾಶ್ವತವಾಗಿ ಉಳಿಯಲು ಸಾಧ್ಯವಿಲ್ಲ




ಎಂಬುದಕ್ಕೆ ರಾಮಾಯಣವೇ ನಿದರ್ಶನ. ಆಧುನಿಕ ಸಮಾಜದಲ್ಲಿಯೂ ರಾಮಾಯಣದ ನೀತಿ, ತತ್ವ ಮತ್ತು ಆದರ್ಶಗಳು ಅತ್ಯಗತ್ಯ ಎಂದರು.

ಅಧಿಕಾರದ ಲಾಲಸೆ ರಾಮಾಯಣ ಕಾಲದಲ್ಲೂ ಇತ್ತು. ಕೈಕೇಯಿಯ ಅಧಿಕಾರದ ಆಸೆಯಿಂದ ಶ್ರೀರಾಮ ವನವಾಸಕ್ಕೆ ತೆರಳಬೇಕಾಯಿತು. ಇಂದಿನ ರಾಜಕೀಯದಲ್ಲೂ ಅಧಿಕಾರಕ್ಕಾಗಿ ನಡೆಯುವ ಪೈಪೋಟಿ ಯನ್ನು ಕಾಣಬಹುದು ಎಂದು ಹೇಳಿದರು.

ಸಮಾಜದ ಎಲ್ಲ ಸಮುದಾಯಗಳ ಮಹನೀಯರ ಜಯಂತಿ ಆಚರಿಸುವ ಮೂಲಕ ಅವರ ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಪೊಲೀಸ್ ವ–ರಿಷ್ಠಾಧಿಕಾರಿ ಶುಭನ್ವಿತ ಸೇರಿದಂತೆ ವಿವಿಧ ಮುಖಂಡರು ಉಪಸ್ಥಿತರಿದ್ದರು.



ಹಾಸನ: ಹಾಸನಾಂಬೆ ದರ್ಶನಕ್ಕೆ ಸ್ಥಳೀಯರಿಗೆ ಆಧಾರ್ ಕಾರ್ಡ್ ಆಧಾರಿತ ಪ್ರತ್ಯೇಕ ವ್ಯವಸ್ಥೆ ಇರುವುದಿಲ್ಲ. ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ತಪ್ಪಿತಸ್ಥರು ಯಾರೇ ಆಗಿದ್ದರೂ ಕಾನೂನು ಪ್ರಕಾರ ಶಿಕ್ಷೆಯಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಹೇಳಿದರು. ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಕರಣದ ತನಿಖೆ ನಡೆಯುತ್ತಿದ್ದು, ಸತ್ಯಾಸತ್ಯತೆ ಹೊರಬರಲು ಅವಕಾಶ ನೀಡಬೇಕು ಎಂದರು.

ಪ್ರಜಾ ಭಾರತ
ಶುಭ ನುಡಿ

ಮಾತು ಸರಳವಾಗಿರಲಿ,
ಮನಸ್ಸು ನಿರ್ಮಲವಾಗಿರಲಿ,
ಬದುಕು ಇತರರಿಗೆ ಮಾದರಿಯಾಗಿರಲಿ..!!

ಇಸ್ರೇಲ್‌ನಲ್ಲಿ ಮಂಗಳೂರಿನ ವ್ಯಕ್ತಿ ನಾಪತ್ತೆ; ಪತ್ತೆಗಾಗಿ ಭಾರತೀಯ ರಾಯಭಾರ ಕಚೇರಿಗೆ ಕುಟುಂಬದ ಮನವಿ

ಮಂಗಳೂರು: ಉದ್ಯೋಗಕ್ಕಾಗಿ ಇಸ್ರೇಲ್‌ಗೆ ತೆರಳಿದ್ದ ಮಂಗಳೂರಿನ 41 ವರ್ಷದ ವ್ಯಕ್ತಿಯೊಬ್ಬರು ನಾಪತ್ತೆಯಾಗಿದ್ದು, ಅವರ ಪತ್ತೆಗಾಗಿ ಕುಟುಂಬದವರು ಮಂಗಳೂರು ನಗರ ಪೊಲೀಸ್ ಆಯುಕ್ತರಿಗೆ ನಾಪತ್ತೆ ದೂರು ಸಲ್ಲಿಸಿದ್ದಾರೆ.

ಹೆತ್ತೂರು ಆಸ್ಪತ್ರೆಯಲ್ಲಿ ಚಿಕಿತ್ಸೆ ವಿಳಂಬ ಆರೋಪ

ತಾಯಿ-ಮಗು ಸಾವು; ಸಂಬಂಧಿಕರ ಆಕ್ರೋಶ, ಸಮಗ್ರ ತನಿಖೆಗೆ ಆಗ್ರಹ

ಪ್ರಜಾ ಭಾರತ ವರದಿ

ಸಕಲೇಶಪುರ: ಹೆರಿಗೆ ನೋವಿನಿಂದ ಆಸ್ಪತ್ರೆಗೆ ದಾಖಲಾಗಿದ್ದ ಗರ್ಭಿಣಿ ಹಾಗೂ ಆಕೆಯ ನವಜಾತ ಶಿಶು ಮೃತಪಟ್ಟಿರುವ ದುರಂತ ಘಟನೆ ತಾಲೂಕಿನ ಹೆತ್ತೂರು ಹೋಬಳಿಯಲ್ಲಿ ನಡೆದಿದೆ. ಹೆತ್ತೂರು ಹೋಬಳಿಯ ಎ ಬ್ಲಾಕ್ ನಿವಾಸಿ ಅಂಬಿಕಾ ಮತ್ತು ಅವರ ಮಗು ಮೃತಪಟ್ಟಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ.



ಹೆರಿಗೆ ನೋವಿನಿಂದ ಅಂಬಿಕಾ ಅವರನ್ನು ಹೆತ್ತೂರು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಮಗುವಿನ ಸ್ಥಿತಿ ಅಡ್ಡಲಾಗಿರುವುದರಿಂದ ಇಲ್ಲಿ ಹೆರಿಗೆ ಮಾಡಿಸಲು ಸಾಧ್ಯವಿಲ್ಲ ಎಂದು ಸಿಬ್ಬಂದಿ ತಿಳಿಸಿದ್ದರು. ಆದರೆ, ಸೂಕ್ತ ಆಂಬುಲೆನ್ಸ್ ವ್ಯವಸ್ಥೆ ದೊರೆಯದ ಕಾರಣ ಮುಂದಿನ ಆಸ್ಪತ್ರೆಗೆ ಕರೆದೊಯ್ಯುವುದು ವಿಳಂಬವಾಯಿತು ಎಂದು ಸಂಬಂಧಿಕರು ಆರೋಪಿಸಿದ್ದಾರೆ.

ಬಳಿಕ ಸಕಲೇಶಪುರದಿಂದ ಹಾಸನ ಜಿಲ್ಲಾಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಅಲ್ಲಿ ಶಸ್ತ್ರಚಿಕಿತ್ಸೆ ಅಗತ್ಯವಿದೆ ಎಂದು ವೈದ್ಯರು ತಿಳಿಸಿದ ಸಂದರ್ಭದಲ್ಲಿ ಮಗು ಗರ್ಭದಲ್ಲೇ ಮೃತಪಟ್ಟಿರುವುದಾಗಿ ಹೇಳಲಾಗಿದೆ. ಅಂಬಿಕಾ ಅವರ ಸ್ಥಿತಿ ಗಂಭೀರವಾಗಿದ್ದರಿಂದ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಾಣಿವಿಲಾಸ ಆಸ್ಪತ್ರೆಗೆ ಕರೆದೊಯ್ಯುವಂತೆ ಸೂಚಿಸಲಾಗಿತ್ತು. ಆದರೆ, ಮಾರ್ಗಮಧ್ಯೆಯೇ ಅಂಬಿಕಾ ಮೃತಪಟ್ಟಿದ್ದಾರೆ ಎನ್ನಲಾಗಿದೆ.

● ನಿರ್ಲಕ್ಷ್ಯವೇ ಕಾರಣವೇ? ತನಿಖೆಗೆ ಆಗ್ರಹ

ಸಕಾಲದಲ್ಲಿ ಚಿಕಿತ್ಸೆ ಹಾಗೂ ಆಂಬುಲೆನ್ಸ್ ವ್ಯವಸ್ಥೆ ದೊರೆತಿದ್ದರೆ ತಾಯಿ-ಮಗುವಿನ ಜೀವ ಉಳಿಸಬಹುದಿತ್ತು ಎಂದು ಕುಟುಂಬಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹೆತ್ತೂರು ಆಸ್ಪತ್ರೆಯ ಸಿಬ್ಬಂದಿಯ ನಿರ್ಲಕ್ಷ್ಯವೇ ದುರಂತಕ್ಕೆ ಕಾರಣ ಎಂದು ಆರೋಪಿಸಿರುವ ಅವರು, ಘಟನೆ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಆದರೆ, ಚಿಕಿತ್ಸೆಯಲ್ಲಿನ ನಿರ್ಲಕ್ಷ್ಯದ ಆರೋಪಗಳು ಅಧಿಕೃತ ತನಿಖೆಯಿಂದ ದೃಢಪಟ್ಟಿಲ್ಲ.

ಮದುವೆಯಾಗುವುದಾಗಿ ನಂಬಿಸಿ ಪ್ರಿಯಕರ ನಾಪತ್ತೆ: ಮನೆ ಮುಂದೆ ಪ್ರೇಯಸಿಯ ಧರಣಿ



ಪ್ರಜಾ ಭಾರತ ವರದಿ

ಚನ್ನರಾಯಪಟ್ಟಣ: ಪ್ರೀತಿಸಿ ಮದುವೆಯಾಗುವುದಾಗಿ ನಂಬಿಸಿ ಐದು ತಿಂಗಳು ಜೊತೆಯಲ್ಲಿದ್ದು, ಇದೀಗ ಪ್ರಿಯಕರ ನಾಪತ್ತೆಯಾಗಿದ್ದಾನೆ ಎಂದು ಆರೋಪಿಸಿ ಯುವತಿಯೊಬ್ಬಳು ಪ್ರಿಯಕರನ ಮನೆ ಮುಂದೆ ಧರಣಿ ನಡೆಸುತ್ತಿರುವ ಘಟನೆ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಕಲ್ಲೇಸೋಮನಹಳ್ಳಿಯಲ್ಲಿ ನಡೆದಿದೆ.

ಕಾಸರಗೋಡು ಮೂಲದ ನಿಷ್ಮಾ ಧರಣಿ ನಡೆಸುತ್ತಿರುವ ಯುವತಿಯಾಗಿದ್ದು, ಗ್ರಾಮದ ಸೂರ್ಯ (26) ಎಂಬಾತ ಮದುವೆಯಾಗುವುದಾಗಿ ನಂಬಿಸಿ ಮೋಸ ಮಾಡಿದ್ದಾನೆ ಎಂದು ಆರೋಪಿಸಿದ್ದಾರೆ. ಬೆಂಗಳೂರಿನ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಇಬ್ಬರೂ ಪರಸ್ಪರ ಪ್ರೀತಿಸಿ, ಮದುವೆಯಾಗುವ ಒಪ್ಪಿಗೆಯೊಂದಿಗೆ ಐದು ತಿಂಗಳು ಲಿವಿಂಗ್ ರಿಲೇಷನ್‌ಶಿಪ್‌ನಲ್ಲಿ ಒಂದೇ ಮನೆಯಲ್ಲಿ ವಾಸವಾಗಿದ್ದರು ಎನ್ನಲಾಗಿದೆ.

ಈ ನಡುವೆ ಮದುವೆಗೆ ಸೂರ್ಯನ ಪೋಷಕರೂ ಒಪ್ಪಿಗೆ ಸೂಚಿಸಿದ್ದರು ಎನ್ನಲಾಗಿದ್ದು, ಸೆಪ್ಟೆಂಬರ್ 24ರಿಂದ ಸೂರ್ಯ ನಾಪತ್ತೆಯಾಗಿದ್ದಾನೆ ಎಂದು ನಿಷ್ಮಾ ಆರೋಪಿಸಿದ್ದಾರೆ. ಪ್ರಿಯಕರನ ಸುಳಿವು ಸಿಗದ ಹಿನ್ನೆಲೆಯಲ್ಲಿ ಮನನೊಂದು ಆತ್ಮಹತ್ಯೆಗೆ ಯತ್ನಿಸಿದ್ದ ಯುವತಿ, ಚಿಕಿತ್ಸೆ ಪಡೆದ ಬಳಿಕ ನ್ಯಾಯಕ್ಕಾಗಿ ಹೋರಾಟಕ್ಕಿಳಿದಿದ್ದಾರೆ.

ಮದುವೆಯಾಗುವುದಾಗಿ ನಂಬಿಸಿ ಲೈಂಗಿಕ ದೌರ್ಜನ್ಯ ಎಸಗಿರುವುದಾಗಿ ನಿಷ್ಮಾ ಬೆಂಗಳೂರಿನ ಮಹಾಲಕ್ಷ್ಮಿ ಲೇಔಟ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿ ಸೂರ್ಯನ ಪತ್ತೆಗೆ ಮುಂದಾಗಿದ್ದಾರೆ. ಆದರೆ, 20 ದಿನ ಕಳೆದರೂ ಆತನ ಸುಳಿವು ಪತ್ತೆಯಾಗಿಲ್ಲ ಎಂದು ಯುವತಿ ತಿಳಿಸಿದ್ದಾರೆ.

ಅಕ್ಟೋಬರ್ 22ರಂದು ಕಲ್ಲೇಸೋಮನಹಳ್ಳಿಗೆ ಬಂದಿದ್ದ ನಿಷ್ಮಾ, ಪ್ರಿಯಕರನ ಮನೆ ಎದುರು ಧರಣಿ ಆರಂಭಿಸಿದ್ದಾರೆ. ಈ ವೇಳೆ ಚನ್ನರಾಯಪಟ್ಟಣ ಗ್ರಾಮಾಂತರ ಪೊಲೀಸರು ಮಧ್ಯಪ್ರವೇಶಿಸಿದ್ದು, ಸೂರ್ಯನನ್ನು ಠಾಣೆಗೆ ಕರೆಸುವುದಾಗಿ ಆತನ ಪೋಷಕರು ಭರವಸೆ ನೀಡಿದ್ದರು ಎನ್ನಲಾಗಿದೆ. ಭಾನುವಾರದೊಳಗೆ ಕರೆಸುವುದಾಗಿ ಹೇಳಿದ್ದ ಪೋಷಕರು, ಇದೀಗ ಮನೆಗೆ ಬೀಗ ಹಾಕಿಕೊಂಡು ತೆರಳಿದ್ದಾರೆ ಎಂದು ಯುವತಿ ಆರೋಪಿಸಿದ್ದಾರೆ.

ಇದರಿಂದಾಗಿ ನಿಷ್ಮಾ ಮನೆ ಮುಂದೆಯೇ ಹಗಲು-ರಾತ್ರಿ ಧರಣಿ ಮುಂದುವರಿಸಿದ್ದು, ಸುರಿಯುವ ಮಳೆ ಹಾಗೂ ಚಳಿಯ ನಡುವೆಯೂ ನ್ಯಾಯಕ್ಕಾಗಿ ಕಾಯುತ್ತಿದ್ದಾರೆ. ಪ್ರೀತಿಸಿ ಮದುವೆಯಾಗುವುದಾಗಿ ನಂಬಿಸಿದ್ದ ವ್ಯಕ್ತಿ ನಾಪತ್ತೆಯಾಗಿರುವ ಆರೋಪದ ಹಿನ್ನೆಲೆಯಲ್ಲಿ ಯುವತಿಯ ಹೋರಾಟ ಗಮನ ಸೆಳೆದಿದೆ.

ಘಟನೆ ಚನ್ನರಾಯಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಹೋಟೆಲ್ ಮೇಲೆ ಆಹಾರ ಇಲಾಖೆ ದಿಢೀರ್ ದಾಳಿ ವಾಣಿಜ್ಯ ಬಳಕೆಗೆ ಗೃಹಬಳಕೆ ಸಿಲಿಂಡರ್, 2 ಸಿಲಿಂಡರ್ ವಶಕ್ಕೆ



ಪ್ರಜಾ ಭಾರತ ವರದಿ

ಬೇಲೂರು: ಗೃಹಬಳಕೆಯ ಅಡುಗೆ ಅನಿಲ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಆಹಾರ ಇಲಾಖೆ ಅಧಿಕಾರಿಗಳು, ಪಟ್ಟಣದ ನೆಹರು ನಗರ ವೃತ್ತದಲ್ಲಿರುವ ಉಡುಪಿ ಗ್ರಾಂಡ್ ಹೋಟೆಲ್ ಮೇಲೆ ದಿಢೀರ್ ದಾಳಿ ನಡೆಸಿ 2 ಸಿಲಿಂಡರ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಆಹಾರ ಶಿರಸ್ತೇದಾರ್ ಗೀತಾಂಜಲಿ, ಆಹಾರ ನಿರೀಕ್ಷಕಿ ವೀಣಾ ಹಾಗೂ ಆಹಾರ ನಿರೀಕ್ಷಕ ವೇದಾಮೂರ್ತಿ ಅವರು ಹೋಟೆಲ್‌ನಲ್ಲಿ ಪರಿಶೀಲನೆ ನಡೆಸಿದರು. ಈ ವೇಳೆ 14.2 ಕೆ.ಜಿ. ತೂಕದ ಎಚ್‌ಪಿ ಕಂಪನಿಯ ಒಂದು ಖಾಲಿ ಹಾಗೂ ಒಂದು ತುಂಬಿದ ಗೃಹಬಳಕೆಯ ಅನಿಲ ಸಿಲಿಂಡರ್ ಪತ್ತೆಯಾಗಿದ್ದು, ಅವುಗಳನ್ನು ವಶಕ್ಕೆ ಪಡೆಯಲಾಗಿದೆ.

ಈ ವಿಚಾರವಾಗಿ ಆಹಾರ ಶಿರಸ್ತೇದಾರ್ ಗೀತಾಂಜಲಿ ಮಾತನಾಡಿ, ಗೃಹಬಳಕೆಯ ಅನಿಲ ಸಿಲಿಂಡರ್‌ಗಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುವುದು ನಿಯಮಬಾಹಿರವಾಗಿದೆ. ಬೇಲೂರಿನ ನೆಹರು ನಗರ ವೃತ್ತದಲ್ಲಿರುವ ಉಡುಪಿ ಗ್ರಾಂಡ್ ಹೋಟೆಲ್‌ನಲ್ಲಿ ಪರಿಶೀಲನೆ ನಡೆಸಿದಾಗ 14.2 ಕೆ.ಜಿ. ತೂಕದ ಎಚ್‌ಪಿ ಕಂಪನಿಯ ಒಂದು ಖಾಲಿ ಹಾಗೂ ಒಂದು ತುಂಬಿದ ಸಿಲಿಂಡರ್ ಪತ್ತೆಯಾಗಿದ್ದು, ಎರಡನ್ನೂ ವಶಪಡಿಸಿಕೊಳ್ಳಲಾಗಿದೆ. ಅಕ್ರಮವಾಗಿ ಸಿಲಿಂಡರ್ ಬಳಕೆ ಮಾಡಿದ ಆರೋಪದ ಹಿನ್ನೆಲೆಯಲ್ಲಿ ಹೋಟೆಲ್ ಮಾಲೀಕರ ವಿರುದ್ಧ ಕಾನೂನು ಕ್ರಮ ಕೈಗೊಂಡು ಪ್ರಕರಣ ದಾಖಲಿಸಲಾಗುವುದು ಎಂದು ಹೇಳಿದರು.

ಸಕಲೇಶಪುರದಲ್ಲಿ ವಿಶ್ವಕರ್ಮ ಜಯಂತ್ಯುತ್ಸವ ಸಂಭ್ರಮ

ಶಿಕ್ಷಣ, ಸಂಘಟನೆ, ಸ್ವಾವಲಂಬನೆಗೆ ಒತ್ತು; ಸಮುದಾಯ ಭವನ ನಿರ್ಮಾಣಕ್ಕೆ ಕರೆ

ಪ್ರಜಾ ಭಾರತ ವರದಿ

ಸಕಲೇಶಪುರ: ತಾಲೂಕು ವಿಶ್ವಕರ್ಮ ಸಮಾಜ ಹಾಗೂ ವಿವಿಧ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಭಗವಾನ್ ಶ್ರೀ ವಿಶ್ವಕರ್ಮರ ಪೂಜಾ ಮಹೋತ್ಸವ ಮತ್ತು ಬೃಹತ್ ಸಭಾ ಕಾರ್ಯಕ್ರಮ ಭಕ್ತಿಭಾವದಿಂದ ನಡೆಯಿತು.



ಅರೆಮಾದೇನಹಳ್ಳಿ ಶ್ರೀ ವಿಶ್ವಕರ್ಮ ಜಗದ್ಗುರು ಪೀಠದ ಶಿವಸುಜ್ಞಾನ ತೀರ್ಥ ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಕಿರಿಯ ಶ್ರೀಗಳಾದ ಜ್ಞಾನಧನ ವಿದ್ಯಾ ತೀರ್ಥ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ಶಾಸಕ ಎಸ್. ಮಂಜುನಾಥ್ ಅಧ್ಯಕ್ಷತೆ ವಹಿಸಿದ್ದರು.ಮಂಗಳೂರಿನ ಫಾದರ್ ಮುಲ್ಲರ್ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಲಕ್ಷ್ಮೀಗಂಗಾ ಮಾತನಾಡಿ, ಶಿಕ್ಷಣ, ಕೌಶಲ್ಯಾಭಿವೃದ್ಧಿ ಮತ್ತು ಸ್ವಾವಲಂಬನೆಯಿಂದ ಯುವಜನರು ಸಾಧನೆ ಮಾಡಬೇಕು. ಸಮಾಜದ ಪ್ರಗತಿಗೆ ಸಂಘಟನೆ, ಪರಸ್ಪರ ಸಹಕಾರ ಹಾಗೂ ಸಾಮಾಜಿಕ ಜವಾಬ್ದಾರಿ ಅಗತ್ಯ ಎಂದು ತಿಳಿಸಿದರು. ಸಮಾಜದ ಸಂಘಟನೆ ಬಲಪಡಿಸಲು, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ವೇದಿಕೆ ಕಲ್ಪಿಸಲು ಸಮುದಾಯ ಭವನ ನಿರ್ಮಾಣಕ್ಕೆ ಎಲ್ಲರೂ ಒಗ್ಗಟ್ಟಿನಿಂದ ಕೈಜೋಡಿಸಬೇಕು ಎಂದು ಗಣ್ಯರು ಅಭಿಪ್ರಾಯಪಟ್ಟರು.

ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ, ಮಾಜಿ ಶಾಸಕರಾದ ಬಿ.ಆರ್. ಗುರುದೇವ್, ಎಚ್.ಎಂ. ವಿಶ್ವನಾಥ್, ಕಾಂಗ್ರೆಸ್ ಮುಖಂಡ ಮುರಳಿ ಮೋಹನ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೈಯದ್ ಮುಜೀಬ್, ಟಿಎಪಿಸಿಎಂಎಸ್ ಅಧ್ಯಕ್ಷ ಯು.ಪಿ. ಶಿವಕುಮಾರ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದರು.



ಪ್ರಜಾ ಭಾರತ ವರದಿ

ಹಾಸನ: ಸತ್ಯ, ಧರ್ಮ, ನ್ಯಾಯ ಹಾಗೂ ಮಾನವೀಯ ಮೌಲ್ಯಗಳೊಂದಿಗೆ ಬದುಕು ರೂಪಿಸಿಕೊಳ್ಳಲು ಮಹರ್ಷಿ ವಾಲ್ಮೀಕಿಯವರ ಚಿಂತನೆಗಳು ಮತ್ತು ರಾಮಾಯಣದ ತತ್ವಗಳು ದಾರಿದೀಪವಾಗಿವೆ ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯಲ್ಲಿ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲಾ ಅವರು ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಿದರು. ಇದೇ ವೇಳೆ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಲಾಯಿತು.

ನಂತರ ಮಾತನಾಡಿದ ಜಿಲ್ಲಾಧಿಕಾರಿ, ಮಹರ್ಷಿ ವಾಲ್ಮೀಕಿಯವರು ಜಗತ್ತಿಗೆ ಮಹಾಕಾವ್ಯ ರಾಮಾಯಣವನ್ನು ಕೊಡುಗೆಯಾಗಿ ನೀಡಿದ ಆದಿಕವಿ ಹಾಗೂ ಮಹಾನ್ ದಾರ್ಶನಿಕರು. ಆದರ್ಶ ಜೀವನ ಹೇಗಿರಬೇಕು, ಮಾನವೀಯ ಮೌಲ್ಯಗಳನ್ನು ಹೇಗೆ ಅಳವಡಿಸಿಕೊಳ್ಳಬೇಕು ಮತ್ತು ಸತ್ಯ, ಧರ್ಮ, ನ್ಯಾಯ ಹಾಗೂ ಕರ್ತವ್ಯನಿಷ್ಠೆಯೊಂದಿಗೆ ಬದುಕನ್ನು ಹೇಗೆ ರೂಪಿಸಿಕೊಳ್ಳಬೇಕು ಎಂಬುದನ್ನು ತಮ್ಮ ಕಾವ್ಯದ ಮೂಲಕ ಜಗತ್ತಿಗೆ ತೋರಿಸಿಕೊಟ್ಟಿದ್ದಾರೆ ಎಂದರು. ವಾಲ್ಮೀಕಿಯವರ ಚಿಂತನೆಗಳು ಹಾಗೂ ರಾಮಾಯಣದ ತತ್ವಗಳು ವ್ಯಕ್ತಿಯ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರುವ ಶಕ್ತಿಯನ್ನು ಹೊಂದಿವೆ. ಅವರ ಆದರ್ಶಗಳನ್ನು ಸ್ಮರಿಸಿ, ಸಮಾಜದಲ್ಲಿ ಉತ್ತಮ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಕಳಪೆ ಕಾಮಗಾರಿಗೆ ಕರವೇ ಬ್ರೇಕ್

ಬೇಲೂರು-ಸಕಲೇಶಪುರ ರಾಜ್ಯ ಹೆದ್ದಾರಿಯಲ್ಲಿ ಮಣ್ಣಿನ ಮಿಶ್ರಣದಿಂದ ಗುಂಡಿ ಮುಚ್ಚುವ ಆರೋಪ

ಪ್ರಜಾ ಭಾರತ ವರದಿ

ಬೇಲೂರು: ಬೇಲೂರು-ಸಕಲೇಶಪುರ ರಾಜ್ಯ ಹೆದ್ದಾರಿಯ ಗುಂಡಿಗಳನ್ನು ಕಳಪೆ ಜಲ್ಲಿ ಹಾಗೂ ಮಣ್ಣಿನ ಮಿಶ್ರಣದಿಂದ ಮುಚ್ಚಲಾಗುತ್ತಿದೆ ಎಂದು ಆರೋಪಿಸಿ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಪದಾಧಿಕಾರಿಗಳು ಹಾಗೂ ತಗರೆ ಸುತ್ತಮುತ್ತಲಿನ ಗ್ರಾಮಸ್ಥರು ಕಾಮಗಾರಿ ತಡೆದು ಪ್ರತಿಭಟನೆ ನಡೆಸಿದರು.



ತಾಲೂಕಿನ ತಗರೆ ಗ್ರಾಮದ ಸಮೀಪ ರಾಜ್ಯ ಹೆದ್ದಾರಿಯಲ್ಲಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಕರವೇ ಗೌರವಾಧ್ಯಕ್ಷ ಕೋಗಿಲೆಮನೆ ಕುಮಾರ್, ಹಲವು ವರ್ಷಗಳಿಂದ ರಸ್ತೆ ಸಂಪೂರ್ಣ ಹದಗೆಟ್ಟಿದ್ದು, ಬೃಹತ್ ಗುಂಡಿಗಳಿಂದ ವಾಹನ ಸವಾರರು ನಿತ್ಯ ಸಂಕಷ್ಟ ಅನುಭವಿಸುವಂತಾಗಿದೆ. ರಸ್ತೆಯಲ್ಲಿ ಒಂದಲ್ಲ ಒಂದು ಅಪಘಾತಗಳು ಸಂಭವಿಸುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.ಅತಿಭಾರದ 50ರಿಂದ 60 ಟನ್‌ಗಳಷ್ಟು ಸರಕು ಸಾಗಿಸುವ ವಾಹನಗಳ ಸಂಚಾರವೂ ರಸ್ತೆ ಹಾಳಾಗಲು ಪ್ರಮುಖ ಕಾರಣವಾಗಿದೆ. ಭಾರೀ ವಾಹನಗಳ ಸಂಚಾರದ ಮೇಲೆ ನಿಗಾ ವಹಿಸಬೇಕಾದ ಆರ್‌ಟಿಒ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಸಣ್ಣ ರೈತರು ಹಾಗೂ ವ್ಯಾಪಾರಸ್ಥರ ವಾಹನಗಳನ್ನು ತಡೆದು ದಂಡ ವಸೂಲಿ ಮಾಡುವ ಅಧಿಕಾರಿಗಳು, ಅತಿಭಾರದ ವಾಹನಗಳ ಸಂಚಾರದ ಬಗ್ಗೆ ಏಕೆ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಪ್ರಶ್ನಿಸಿದರು.

ಗುತ್ತಿಗೆದಾರ ಹರೀಶ್ ನೇತೃತ್ವದಲ್ಲಿ ನಡೆಯುತ್ತಿದ್ದ ರಸ್ತೆ ಗುಂಡಿ ಮುಚ್ಚುವ ಕಾಮಗಾರಿಯಲ್ಲಿ ಕಳಪೆ ಜಲ್ಲಿ ಮತ್ತು ಮಣ್ಣಿನ ಮಿಶ್ರಣ ಬಳಸಲಾಗುತ್ತಿದೆ ಎಂಬ ಆರೋಪ ಕೇಳಿಬಂದಿದೆ. ಈ ಕಾಮಗಾರಿಯಿಂದ ರಸ್ತೆ ದುರಸ್ತಿಯಾಗುವ ಬದಲು ಸಾರ್ವಜನಿಕರ ಹಣ ವ್ಯರ್ಥವಾಗುವ ಸಾಧ್ಯತೆಯಿದೆ. ಹೀಗಾಗಿ ಸಂಘಟನೆಯ ಮುಖಂಡರು ಹಾಗೂ ಗ್ರಾಮಸ್ಥರೊಂದಿಗೆ ಸೇರಿ ಕಾಮಗಾರಿಯನ್ನು ತಡೆದಿದ್ದೇವೆ. ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಗುಣಮಟ್ಟದ ಸಾಮಗ್ರಿಗಳನ್ನು ಬಳಸಿ ರಸ್ತೆ ದುರಸ್ತಿ ಮಾಡಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಕರವೇ ತಾಲೂಕು ಉಪಾಧ್ಯಕ್ಷ ಚಂದ್ರೇಗೌಡ ಮಾತನಾಡಿ, ಈ ರಸ್ತೆಯಲ್ಲಿ ಪ್ರತಿನಿತ್ಯ ನೂರಾರು ವಾಹನಗಳು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಂಚರಿಸುತ್ತಾರೆ. ರಸ್ತೆ ಗುಂಡಿಗಳಿಂದ ಅಪಘಾತಗಳ ಆತಂಕ ಎದುರಾಗಿದ್ದರೂ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿಲ್ಲ. ತಕ್ಷಣ ಗುಂಡಿಗಳನ್ನು ಮುಚ್ಚುವುದರ ಜೊತೆಗೆ ಸಂಪೂರ್ಣ ರಸ್ತೆಯನ್ನು ವೈಜ್ಞಾನಿಕವಾಗಿ ಮರುನಿರ್ಮಾಣ ಮಾಡಬೇಕು. ಇಲ್ಲದಿದ್ದರೆ ಲೋಕೋಪಯೋಗಿ ಇಲಾಖೆ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುವುದು ಎಂದರು.ಪ್ರತಿಭಟನೆಯಲ್ಲಿ ಕರವೇ ನಗರ ಅಧ್ಯಕ್ಷ ಪ್ರಸನ್ನ, ಸ್ಥಳೀಯರಾದ ಬಸವರಾಜು, ಟಿ.ವಿ. ಸೋಮಶೇಖರ್, ಮಧು, ರಮೇಶ್, ಟಿ.ಎಂ. ಮಲ್ಲೇಶ್ ಸೇರಿದಂತೆ ಇತರರು ಪಾಲ್ಗೊಂಡಿದ್ದರು.

ಕಳಪೆ ಕಾಮಗಾರಿ ಸರಿಪಡಿಸುವ ಭರವಸೆ

ಬೇಲೂರು-ಸಕಲೇಶಪುರ ರಾಜ್ಯ ಹೆದ್ದಾರಿಯ ಗುಂಡಿ ಮುಚ್ಚುವ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದೆ ಎಂದು ಕರವೇ ಕಾರ್ಯಕರ್ತರು ಹಾಗೂ ಸ್ಥಳೀಯರು ದೂರು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಂಡು ಉತ್ತಮ ಗುಣಮಟ್ಟದ ಕಾಮಗಾರಿ ಮಾಡಿಸಲಾಗುವುದು ಎಂದು ಲೋಕೋಪಯೋಗಿ ಇಲಾಖೆ ಬೇಲೂರಿನ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಎಇಇ) ರಾಮಣ್ಣಗೌಡ ಭರವಸೆ ನೀಡಿದ್ದಾರೆ.

ಸಿದ್ದರಾಮಯ್ಯ ವಿರುದ್ಧದ ಪಿತೂರಿ ಆರೋಪ: ಜೆಡಿಎಸ್ ಆಕ್ಷೇಪ

ಪ್ರಕರಣದ ಉನ್ನತಮಟ್ಟದ ತನಿಖೆಗೆ ಆಗ್ರಹ; ಅ.28ರಂದು ಹಾಸನದಲ್ಲಿ ಪ್ರತಿಭಟನೆ

ಪ್ರಜಾ ಭಾರತ ವರದಿ

ಅರಕಲಗೂಡು : ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ರಾಜಕೀಯ ಪಿತೂರಿ ನಡೆದಿದೆ ಎಂಬ ಆರೋಪದ ಕುರಿತು ಆಕ್ಷೇಪ ವ್ಯಕ್ತಪಡಿಸಿರುವ ಅರಕಲಗೂಡು ತಾಲೂಕು ಜೆಡಿಎಸ್ ಅಧ್ಯಕ್ಷ ಕೆ.ಸತೀಶ್, ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.



ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಅವರು ಅಹಿಂದ ಸಮುದಾಯದ ಪ್ರಮುಖ ನಾಯಕರಾಗಿದ್ದು, ಅಪಾರ ಅಭಿಮಾನಿಗಳನ್ನು ಹೊಂದಿದ್ದಾರೆ. ಅವರ ವಿರುದ್ಧದ ಬೆಳವಣಿಗೆಗಳು ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿವೆ. ಅಧಿಕಾರಕ್ಕಾಗಿ ರಾಜಕೀಯ ಪೈಪೋಟಿ ನಡೆಸುವುದು ಹೊಸತಲ್ಲವಾದರೂ, ರಾಜಕೀಯ ಭಿನ್ನಾಭಿಪ್ರಾಯಗಳು ವೈಯಕ್ತಿಕ ಆರೋಪ-ಪ್ರತ್ಯಾರೋಪಗಳಿಗೆ ಕಾರಣವಾಗಬಾರದು ಎಂದು ಅಭಿಪ್ರಾಯಪಟ್ಟರು.

ಸಿದ್ದರಾಮಯ್ಯ ಅವರನ್ನು ಬಳಸಿಕೊಂಡು ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ ಎಂಬುದು ತಮ್ಮ ಅಭಿಪ್ರಾಯವೆಂದು ತಿಳಿಸಿದ ಅವರು, ಇದೀಗ ಅವರ ವಿರುದ್ಧ ಸ್ಟಿಂಗ್ ಆಪರೇಷನ್ ನಡೆಸಿ ರಾಜಕೀಯವಾಗಿ ಮುಜುಗರ ಉಂಟುಮಾಡುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದರು. ಈ ಆರೋಪಗಳ ಸತ್ಯಾಸತ್ಯತೆ ತನಿಖೆಯಿಂದ ಸ್ಪಷ್ಟವಾಗಬೇಕು ಎಂದು ಹೇಳಿದರು.

ಸಿದ್ದರಾಮಯ್ಯ ಅವರ ಬೆಂಬಲಕ್ಕೆ ನಿಲ್ಲುವ ಉದ್ದೇಶದಿಂದ ಅ.28ರಂದು ಹಾಸನದಲ್ಲಿ ಜೆಡಿಎಸ್ ವತಿಯಿಂದ ಪ್ರತಿಭಟನೆ ನಡೆಸಲಾಗುವುದು.

ಅಂದು ಹೇಮಾವತಿ ಪ್ರತಿಮೆಯ ಬಳಿಯಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಅಹಿಂದ ಸಂಘಟನೆಗಳು ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಸಹಯೋಗದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಯಲಿದೆ ಎಂದು ತಿಳಿಸಿದರು.

ಹಿಂದುಳಿದ ವರ್ಗಗಳ ಘಟಕದ ತಾಲೂಕು ಅಧ್ಯಕ್ಷ ಕೃಷ್ಣೇಗೌಡ, ಸಿದ್ದರಾಮಯ್ಯ ಅವರ ವಿರುದ್ಧದ ಆರೋಪಗಳು ಮತ್ತು ರಾಜಕೀಯ ಬೆಳವಣಿಗೆಗಳ ಕುರಿತು ಸಮಗ್ರ ತನಿಖೆಯಾಗಬೇಕು ಎಂದು ಆಗ್ರಹಿಸಿದರು.

ಪ್ರಕರಣವನ್ನು ಸಿಬಿಐಗೆ ವಹಿಸಿ ಉನ್ನತಮಟ್ಟದ ತನಿಖೆ ನಡೆಸಿದರೆ ಸತ್ಯಾಂಶ ಹೊರಬರಲಿದೆ ಎಂಬುದು ತಮ್ಮ ಅಭಿಪ್ರಾಯವಾಗಿದೆ ಎಂದು ತಿಳಿಸಿದರು.

● ಹಲವು ಮುಖಂಡರು ಭಾಗಿ


ಅ.28 ರಂದು ನಡೆಯಲಿರುವ ಪ್ರತಿಭಟನೆಯಲ್ಲಿ ಅರಕಲಗೂಡು ಶಾಸಕ ಎ.ಮಂಜು, ಹೊಳೆನರಸೀಪುರ ಶಾಸಕ ಎಚ್.ಡಿ.ರೇವಣ್ಣ, ಹಾಸನ ಶಾಸಕ ಎಚ್.ಪಿ.ಸ್ವರೂಪ್ ಸೇರಿದಂತೆ ಶಾಸಕರು, ಮಾಜಿ ಶಾಸಕರು ಹಾಗೂ ಜೆಡಿಎಸ್ ಮುಖಂಡರು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿದರು.

ಈ ವೇಳೆ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ನರಸೇಗೌಡ, ಜೆಡಿಎಸ್ ಮುಖಂಡ ಎಸ್.ಸತೀಶ್, ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ಪಾಪಣ್ಣ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ವಿ.ಎ.ನಂಜುಂಡಸ್ವಾಮಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಪ್ರಜಾ ಭಾರತ ಪತ್ರಿಕೆಯ ಅಧಿಕೃತ ಪ್ರಕಟಣೆ

ಹಾಸನ ಜಿಲ್ಲಾ ವರದಿಗಾರರಾಗಿ ಮೂರ್ತಿ ಜಿ.ಎನ್. ನೇಮಕ

ಹಾಸನ ಜಿಲ್ಲೆಯಾದ್ಯಂತ ಸಾರ್ವಜನಿಕ ಸಮಸ್ಯೆಗಳು, ಜನರ ಧ್ವನಿ, ಅಭಿವೃದ್ಧಿ ಕಾರ್ಯಗಳು ಹಾಗೂ ವಿವಿಧ ಕ್ಷೇತ್ರಗಳ ಸುದ್ದಿಗಳನ್ನು ಪತ್ರಿಕೆಯ ಮೂಲಕ ಜನರಿಗೆ ತಲುಪಿಸುವ ಉದ್ದೇಶದಿಂದ ಈ ನೇಮಕ ಮಾಡಲಾಗಿದೆ.



ಹಾಸನ ಜಿಲ್ಲೆಯ ಸಾರ್ವಜನಿಕರು ತಮ್ಮ ವ್ಯಾಪ್ತಿಯ ಸುದ್ದಿಗಳ ಪ್ರಕಟಣೆ, ಸಾರ್ವಜನಿಕ ಸಮಸ್ಯೆಗಳ ವರದಿ ಹಾಗೂ ಜಾಹೀರಾತುಗಳಿಗಾಗಿ ಜಿಲ್ಲಾ ವರದಿಗಾರರಾದ ಮೂರ್ತಿ ಜಿ.ಎನ್. ಅವರನ್ನು ಸಂಪರ್ಕಿಸಬಹುದು.

ದೂರವಾಣಿ: 94497 22976

Printed, Published & Owned By Dinesh B G and Printed at Honalu Graphic, Word No. 2, Ashok Road Behind Stadium, Satyamangala Village, Vidya Nagara Hassan District, Karnataka - 573201 and Published at Ward No.1 Behind Budda School, Halebeedu Road Shanthi Nagara Bantenahalli Belur Taluk Hassan Dist, Karnataka - 573115 - Editor Dinesh B G